**All India Radio: Bangalore**
**Regional Bulletin In Kannada**
**27.04.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**27.04.2025 / 2.30 p.m.**
***************

ಮುಖ್ಯಾಂಶಗಳು

೧. ಪಹಲ್ಗಾಮ್ ಭಯೋತ್ಪಾದಕ ದಾಳಿಯ ಸೂತ್ರದಾರರಿಗೆ ಶೀಘ್ರವೇ ತಕ್ಕ ಉತ್ತರ - ಮನದ ಮಾತಿನಲ್ಲಿ ಪ್ರಧಾನಿ ಪುನರುಚ್ಚಾರ

೨. ಬಾಗಲಕೋಟೆ ಮುಧೋಳ ಸೇಬು ಬೆಳೆಗಾರನ ಬಗ್ಗೆ ಪ್ರಧಾನಿ ಗುಣಗಾನ - ಮನ್ ಕೀ ಬಾತ್ ನಲ್ಲಿ ರೈತನ ಕಾರ್ಯಕ್ಕೆ ಮೆಚ್ಚುಗೆ

೩. ಗಣ್ಯರಿಂದ ಹಿರಿಯ ವಿಜ್ಞಾನಿ, ಇಸ್ರೋ ಮಾಜಿ ಅಧ್ಯಕ್ಷ ಕಸ್ತೂರಿ ರಂಗನ್ ಪಾರ್ಥೀವ ಶರೀರದ ಅಂತಿಮ ದರ್ಶನ

೪. ಭಾರತ ಪಾಕ್ ಯುದ್ಧ ವಿಚಾರ - ಸ್ಪಷ್ಟನೆ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ

೫. ೧೮ ಶಾಸಕರ ಅಮಾನತು ಪ್ರಕರಣದಲ್ಲಿ ಸದನದ ತೀರ್ಮಾನವೇ ಅಂತಿಮ - ಸಭಾಧ್ಯಕ್ಷ ಯು.ಟಿ.ಖಾದರ್

***************

ಮನ್ ಕಿ ಬಾತ್ -೧

ಪಹಲ್ಗಾಮ್ ಭಯೋತ್ಪಾದಕ ದಾಳಿಯ ಅಪರಾಧಿಗಳಿಗೆ ಹಾಗೂ ಸೂತ್ರಧಾರರಿಗೆ ಶೀಘ್ರವೇ ತಕ್ಕ ಉತ್ತರ ನೀಡಲಾಗುವುದು ಎಂದು ಪ್ರಧಾನಿ ನರೇಂದ್ರ ಮೋದಿ ಪುನರುಚ್ಚರಿಸಿದ್ದಾರೆ. ಆಕಾಶವಾಣಿಯ ತಮ್ಮ ೧೨೧ನೇ ಮನ್ ಕಿ ಬಾತ್‌ನಲ್ಲಿಂದು ರಾಷ್ಟ್ರವನ್ನುದ್ದೇಶಿಸಿ ಮಾತನಾಡಿದ ಅವರು, ಪಹಲ್ಗಾಮ್‌ನಲ್ಲಿ ಸಾವನ್ನಪ್ಪಿದವರ ಕುಟುಂಬಸ್ಥರಿಗೆ ನ್ಯಾಯ ಒದಗಿಸಲಾಗುವುದು ಎಂದು ಭರವಸೆ ನೀಡಿದ್ದಾರೆ. ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ದೇಶದ ಏಕತೆ, ೧೪೦ ಕೋಟಿ ಭಾರತೀಯರ ಒಗ್ಗಟ್ಟು ನಿರ್ಣಾಯಕ ಪಾತ್ರ ವಹಿಸಲಿದೆ ಎಂದು ಹೇಳಿದ್ದಾರೆ.

ಇತ್ತೀಚೆಗೆ ಅಗಲಿದ ಖ್ಯಾತ ವಿಜ್ಞಾನಿ ಹಾಗೂ ಇಸ್ರೋ ಮಾಜಿ ಅಧ್ಯಕ್ಷ ಡಾ.ಕೆ.ಕಸ್ತೂರಿರಂಗನ್ ಅವರನ್ನು ಸ್ಮರಿಸಿದ ಪ್ರಧಾನಿ, ವಿಜ್ಞಾನ, ಶಿಕ್ಷಣ ಮತ್ತು ಭಾರತದ ಬಾಹ್ಯಾಕಾಶ ಕಾರ್ಯಕ್ರಮವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯುವಲ್ಲಿ ಅವರ ಕೊಡುಗೆ ಸದಾ ಸ್ಮರಣೀಯ. ಅವರ ನೇತೃತ್ವದಲ್ಲಿ ಇಸ್ರೋಗೆ ಹೊಸ ಸ್ಥಾನಮಾನ ದೊರೆಯಿತು ಎಂದು ಮನದ ಮಾತಿನಲ್ಲಿ ಪ್ರಧಾನಿ ತಿಳಿಸಿದ್ದಾರೆ.

ಧ್ವನಿ: ಪಿಎಂ

ದೇಶದ ನೂತನ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಸಿದ್ಧಪಡಿಸುವಲ್ಲಿ ಡಾ.ಕೆ.ಕಸ್ತೂರಿರಂಗನ್ ಅವರು ಬಹು ದೊಡ್ಡ ಪಾತ್ರವಹಿಸಿದ್ದರು ಎಂದು ಹೇಳಿದರು.

ಭಾರತ ತನ್ನ ಬಾಹ್ಯಾಕಾಶ ಕ್ಷೇತ್ರವನ್ನು ಖಾಸಗಿ ವಲಯಕ್ಕೂ ಮುಕ್ತಗೊಳಿಸಿದ್ದು, ಕಳೆದ ಹತ್ತು ವರ್ಷಗಳಲ್ಲಿ ದೇಶದಲ್ಲಿ ಮುನ್ನೂರ ಇಪ್ಪತ್ತೈದಕ್ಕೂ ಹೆಚ್ಚು ಬಾಹ್ಯಾಕಾಶ ನವೋದ್ಯಮಗಳು ಕಾರ್ಯನಿರ್ವಹಿಸುತ್ತಿವೆ. ಭಾರತ ಗಗನಯಾನ, ಸ್ಪೆಡೆಕ್ಸ್ ಮತ್ತು ಚಂದ್ರಯಾನ -೪ ನಂತಹ ಹಲವು ಪ್ರಮುಖ ಯೋಜನೆಗಳ ಸಿದ್ಧತೆಯಲ್ಲಿ ತೊಡಗಿದೆ ಎಂದು ತಿಳಿಸಿದರು.

ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಅಭಿವೃದ್ಧಿಪಡಿಸಿರುವ ಸಚೇತ್ ಆಪ್ ಕುರಿತು ಮಾಹಿತಿ ನೀಡಿದ ಪ್ರಧಾನಿ, ಪ್ರವಾಹ, ಚಂಡಮಾರುತ, ಭೂಕುಸಿತ, ಸುನಾಮಿ, ಕಾಡ್ಗಿಚ್ಚು, ಹಿಮ-ಪಾತ, ಚಂಡಮಾರುತ, ಬಿರುಗಾಳಿಯಂತಹ ಸಂದರ್ಭದಲ್ಲಿ 'ಸಚೇತ್ ಂoPP' ಅಗತ್ಯ ಮಾಹಿತಿಯನ್ನು ತಲುಪಿಸುವ ತಂತ್ರಾಂಶವಾಗಿದ್ದು, ಪ್ರಾದೇಶಿಕ ಭಾಷೆಗಳಲ್ಲಿಯೂ ಸಹ ಸಾಕಷ್ಟು ಮಾಹಿತಿ ಒದಗಿಸುತ್ತದೆ ಎಂದು ಹೇಳಿದರು.

ಬೆಟ್ಟಗುಡ್ಡಗಳಲ್ಲಿ ಬೆಳೆಯಲಾಗುವ ಸೇಬನ್ನು ಕರ್ನಾಟಕದಲ್ಲಿಯೂ ಬೆಳೆಯಲಾಗುತ್ತಿದೆ ಎಂದು ಮನ್ ಕಿ ಬಾತ್‌ನಲ್ಲಿ ಪ್ರಧಾನಿ ಪ್ರಸ್ತಾಪಿಸಿದ್ದಾರೆ. ಬಾಗಲಕೋಟೆಯ ನಿವಾಸಿ ಶ್ರೀಶೈಲ್ ತೇಲಿ ಅವರು ೩೫ ಡಿಗ್ರಿಗಿಂತ ಅಧಿಕ ತಾಪಮಾನವಿರುವ ಬಯಲು ಪ್ರದೇಶದಲ್ಲಿ ಸೇಬು ಬೆಳೆದಿರುವ ಕುರಿತು ಅಚ್ಚರಿ ವ್ಯಕ್ತಪಡಿಸಿದ್ದಾರೆ.

ಧ್ವನಿ: ಪ್ರಧಾನಿ ಮೋದಿ

ರೈತ ಶ್ರೀಶೈಲ ತೇಲಿ ತಮ್ಮ ಏಳು ಎಕರೆ ಜಮೀನಿನಲ್ಲಿ ಸಾವಯವ ವಿಧಾನದಿಂದ ಸೇಬು ಬೆಳೆದು ಅವರು ಲಕ್ಷಾಂತರ ರೂಪಾಯಿ ಆದಾಯ ಗಳಿಸುತ್ತಿದ್ದಾರೆ. ಈ ಯಶಸ್ಸಿನಿಂದ ಇತರ ರೈತರಿಗೆ ಸ್ಪೂರ್ತಿಯಾಗಿದ್ದು, ಸೇಬು ಕೃಷಿಯ ಬಗ್ಗೆ ಅವರು ಜಾಗೃತಿ ಮೂಡಿಸುತ್ತಿದ್ದಾರೆ. ಕಬ್ಬು ಹೆಚ್ಚಾಗಿ ಬೆಳೆಯುವ ಈ ನಾಡಲ್ಲಿ ಸಮೃದ್ಧವಾಗಿ ಸೇಬು ಬೆಳೆದು ಜನರಿಗೆ ಸೇಬಿನ ಸಿಹಿ ಹಂಚುತ್ತಿದ್ದಾರೆ.

ಬಾಗಲಕೋಟೆ, ಬೆಳಗಾವಿ, ವಿಜಯಪುರದ ಸ್ಥಳೀಯ ಮಾರುಕಟ್ಟೆಯಲ್ಲಿ ಮಾರಾಟ ಮಾಡಿ ಕೈ ತುಂಬ ಆದಾಯ ಪಡೆಯುತ್ತಿದ್ದಾರೆ. ಇದೀಗ ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಮನ್ ಕಿ ಬಾತ್‌ನಲ್ಲಿ ಪ್ರಸ್ತಾಪಿಸಿರುವ ಬಗ್ಗೆ ಆಕಾಶವಾಣಿಯೊಂದಿಗೆ ಶ್ರೀಶೈಲ ತೇಲಿ ಸಂತಸ ಹಂಚಿಕೊಂಡಿದ್ದಾರೆ.

ಧ್ವನಿ: ತೇಲಿ

***************

ಇಸ್ರೋ ಮಾಜಿ ಅಧ್ಯಕ್ಷರು ಹಾಗೂ ಪದ್ಮವಿಭೂಷಣ ಡಾ.ಕೆ.ಕಸ್ತೂರಿ ರಂಗನ್ ಅವರ ಪಾರ್ಥೀವ ಶರೀರದ ಅಂತಿಮ ದರ್ಶನವನ್ನು ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವಾರು ಗಣ್ಯರು ಪಡೆದುಕೊಂಡರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಗೃಹ ಸಚಿವ ಡಾ.ಜಿ.ಪರಮೇಶ್ವರ್ ಗೌರವ ನಮನ ಸಲ್ಲಿಸಿದರು.

ಕಸ್ತೂರಿ ರಂಗನ್ ನಿಧನದಿಂದ ದೇಶಕ್ಕೆ ಅದರಲ್ಲೂ ವಿಜ್ಞಾನ ಕ್ಷೇತ್ರಕ್ಕೆ ತುಂಬಲಾರದ ನಷ್ಟ ಉಂಟಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಕಸ್ತೂರಿ ರಂಗನ್ ದೇಶ ಕಂಡ ಹೆಸರಾಂತ ವಿಜ್ಞಾನಿಯಾಗಿದ್ದು, ಬಾಹ್ಯಾಕಾಶ ಹಾಗೂ ಪರಿಸರ ಕ್ಷೇತ್ರಕ್ಕೂ ಅವರ ಕೊಡುಗೆ ಅಪಾರ ಎಂದು ಸ್ಮರಿಸಿದ್ದಾರೆ.

ಧ್ವನಿ: ಮುಖ್ಯಮಂತ್ರಿ

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರತಿಕ್ರಿಯಿಸಿ, ಕಸ್ತೂರಿ ರಂಗನ್ ಅವರ ನಿಧನದಿಂದ ಅಪಾರ ಜ್ಞಾನ ಸಂಪತ್ತನ್ನು ಕಳೆದುಕೊಂಡಿದ್ದೇವೆ ಎಂದು ತಿಳಿಸಿದ್ದಾರೆ. ನಾಡು ಮತ್ತು ಕಾಡಿನ ಸಂಪತ್ತು ಉಳಿಸಲು ದಿಟ್ಟ ನಿರ್ಧಾರಗಳನ್ನು ತೆಗೆದುಕೊಂಡವರು ಕಸ್ತೂರಿ ರಂಗನ್ ಎಂದು ಹೇಳಿದ್ದಾರೆ.

***************

ಯುದ್ಧವನ್ನು ಅನಿವಾರ್ಯವಾದಲ್ಲಿ ಮಾತ್ರ ಮಾಡಬೇಕು. ಯುದ್ಧದಿಂದ ಯಾವುದಕ್ಕೂ ಪರಿಹಾರ ಸಾಧ್ಯವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪುನರುಚ್ಚರಿಸಿದ್ದಾರೆ.

ಬೆಂಗಳೂರಿನಲ್ಲಿಂದು ಯುದ್ಧ ಬೇಡ ಎಂಬ ಹೇಳಿಕೆ ಬಗ್ಗೆ ದೇಶ ವಿದೇಶಗಳಲ್ಲಿ ಚರ್ಚೆಯಾಗುತ್ತಿರುವ ಕುರಿತು ಸುದ್ದಿಗಾರರೊಂದಿಗೆ ಪ್ರತಿಕ್ರಿಯಿಸಿದ ಅವರು, ಓಲೈಕೆ ರಾಜಕಾರಣ ಎಂಬ ಬಿಜೆಪಿ ನಾಯಕರ ಹೇಳಿಕೆಯನ್ನು ತಳ್ಳಿ ಹಾಕಿದ್ದಾರೆ.

ಅನಿವಾರ್ಯವಾದರೆ ಮಾತ್ರ ಯುದ್ಧ ಮಾಡಬೇಕು ಎಂದು ಸ್ಪಷ್ಟಪಡಿಸಿದ್ದಾರೆ.

***************

ಮುಖ್ಯಮಂತ್ರಿ ಸಿದ್ದರಾಮಯ್ಯ ಯುದ್ಧ ಬೇಡ ಎಂಬ ಹೇಳಿಕೆಯಿಂದ ಪಾಕಿಸ್ತಾನದಲ್ಲಿ ಪ್ರಸಿದ್ಧಿ ಪಡೆದಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ವ್ಯಂಗ್ಯವಾಡಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಸಿದ್ದರಾಮಯ್ಯ ಪಾಕಿಸ್ತಾನಕ್ಕೆ ಭೇಟಿ ನೀಡಿದರೆ, ರಾಜಾತೀಥ್ಯ ಖಚಿತ ಎಂದು ಹೇಳಿದ್ದಾರೆ. ಗಡಿಯಲ್ಲಿ ಯುದ್ಧದ ಕಾರ್ಮೋಡ ಕವಿದಿರುವಾಗ ಶತ್ರು ರಾಷ್ಟ್ರದ ಕೈಗೊಂಬೆಯಂತೆ ವರ್ತಿಸುವುದು ಸರಿಯಲ್ಲ ಎಂದು ತಿಳಿಸಿದ್ದಾರೆ.

***************

ಭಯೋತ್ಪಾದಕರಿಂದ ದೇಶವನ್ನು ದುರ್ಬಲಗೊಳಿಸುವ ಯತ್ನ ನಡೆಯುತ್ತಿದ್ದು, ಇದರ ವಿರುದ್ಧ ದೇಶದ ಸಮಸ್ತ ಜನತೆ ಒಗ್ಗಟ್ಟಾಗಬೇಕಿದೆ ಎಂದು ವಿಧಾನ ಸಭಾ ಅಧ್ಯಕ್ಷ ಯು.ಟಿ.ಖಾದರ್ ತಿಳಿಸಿದ್ದಾರೆ.

ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಶ್ಮೀರದಲ್ಲಿ ನಡೆದ ಭಯೋತ್ಪಾದನಾ ಕೃತ್ಯ ಖಂಡನೀಯ ಎಂದು ತಿಳಿಸಿದ್ದಾರೆ.

ದೇಶದ ಜನತೆ ಒಗ್ಗಟ್ಟಾಗಿದ್ದುಕೊಂಡು ಭಯೋತ್ಪಾದಕರ ಸಂಚನ್ನು ವಿಫಲಗೊಳಿಸಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ.

ಇದೇ ವೇಳೆ, ೧೮ ಬಿಜೆಪಿ ಶಾಸಕರ ಅಮಾನತು ಹಿಂಪಡೆಯುವಂತೆ ಬಿಜೆಪಿ ನಿಯೋಗ ಮನವಿ ಮಾಡಿರುವ ಕುರಿತು ಪ್ರತಿಕ್ರಿಯಿಸಿದ ಅವರು, ಅಮಾನತು ಆದೇಶ ತಮ್ಮೊಬ್ಬರ ತೀರ್ಮಾನ ಅಲ್ಲ, ಇಡೀ ಸದನದ ತೀರ್ಮಾನ ಎಂದು ಸಮರ್ಥಿಸಿಕೊಂಡಿದ್ದಾರೆ.

***************

ಕೊಡವರಿಂದಾಗಿ ದೇಶದಲ್ಲಿಯೇ ಹಾಕಿ ಕ್ರೀಡೆ ಅತ್ಯಂತ ಪ್ರಸಿದ್ಧಿ ಪಡೆದಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಮಡಿಕೇರಿಯ ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಕಾಲೇಜಿನಲ್ಲಿ ಕಳೆದ ೧ ತಿಂಗಳಿನಿಂದ ನಡೆಯುತ್ತಿರುವ ಕೊಡವ ಕುಟುಂಬಗಳ ನಡುವಿನ ಮುದ್ದಂಡ ಕಪ್ ಹಾಕಿ ಪಂದ್ಯಾವಳಿಯ ಪೈನಲ್ ಪಂದ್ಯ ಉದ್ಘಾಟಿಸಿ ಅವರು ಮಾತನಾಡಿದರು.

***************

ಇಂದು ನಡೆದ ಟಿಸಿಎಸ್ ೧೦ಕೆ ಓಟ ಗ್ರೇಟರ್ ಬೆಂಗಳೂರಿನ ಹೆಮ್ಮೆಯಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಟಿಸಿಎಸ್ ೧೦ಕೆ ಓಟಕ್ಕೆ ಚಾಲನೆ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರನ್ನು ಗ್ರೇಟರ್ ಬೆಂಗಳೂರು ಮಾಡಲು ಇಂತಹ ಕಾರ್ಯಕ್ರಮಗಳು ಸಹಾಯಕಾರಿಯಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

"೧೦ಕೆ ಓಟದಲ್ಲಿ ೩೫ ಸಾವಿರಕ್ಕೂ ಹೆಚ್ಚು ಜನರು ಭಾಗವಹಿಸಿರುವುದು ತುಂಬಾ ಸಂತೋಷವಾಗಿದೆ. ಒಲಂಪಿಕ್ ಪದಕ ವಿಜೇತರು ಸೇರಿದಂತೆ ೭ ಸಾವಿರಕ್ಕೂ ಹೆಚ್ಚು ಸ್ಪರ್ಧಾಳುಗಳು ಭಾಗವಹಿಸಿದ್ದು, ಆಯೋಜಕರ ಶ್ರಮಕ್ಕೆ ಧನ್ಯವಾದಗಳು" ಎಂದು ಹೇಳಿದ್ದಾರೆ.

***************

ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯವಳಿಯ ಎರಡನೇ ಪಂದ್ಯದಲ್ಲಿಂದು ದೆಹಲಿಯಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ, ಡೆಲ್ಲಿ ಕ್ಯಾಪಿಟಲ್ಸ್ ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ ೭:೩೦ ಕ್ಕೆ ಆರಂಭವಾಗಲಿದೆ.

********ಮುಕ್ತಾಯ*******